# ಅಂತಾರಾಷ್ಟ್ರೀಯ ಸಾಕ್ಷರತಾ ದಿನ

**ಬೆಂಗಳೂರು:** ಸಾಮಾಜಿಕ ಮತ್ತು ಸಮುದಾಯದ ಅಭಿವೃದ್ಧಿಗೆ ಸಾಕ್ಷರತೆಯ ಮಹತ್ವದ ಬಗ್ಗೆ ಜಾಗೃತಿ ಮೂಡಿಸಲು ಸಿಎಂಆರ್ ವಿಶ್ವವಿದ್ಯಾಲಯದ ಸ್ಕೂಲ್ ಆಫ್ ಲೀಗಲ್ ಸ್ಟಡೀಸ್ ವತಿಯಿಂದ ಅಂತಾರಾಷ್ಟ್ರೀಯ ಸಾಕ್ಷರತಾ ದಿನವನ್ನು ಆಚರಿಸಲಾಯಿತು. ಆನ್‌ಲೈನ್ ಮೂಲಕ ಮನೆ ಮನೆಗೆ ಥೀಮ್ ತಲುಪಿಸುವ ಅನೇಕ ಕ್ರಿಯಾಶೀಲ ಚಟುವಟಿಕೆಗಳನ್ನು ವಿಶ್ವವಿದ್ಯಾಲಯದ ವಿದ್ಯಾರ್ಥಿಗಳು ಕೈಗೊಂಡರು. ಪ್ರಸ್ತುತ ಸಂದರ್ಭದಲ್ಲಿ ಕಲಿಕೆಗೆ ಡಿಜಿಟಲ್ ವೇದಿಕೆ ಅತ್ಯಂತ ಮಹತ್ವದ್ದಾಗಿರುವುದರಿಂದ ಡಿಜಿಟಲ್ ಸಾಕ್ಷರತೆಯ ಅಂತರ ಕಡಿಮೆ ಮಾಡಲು ಡಿಜಿಟಲ್ ಮಾಧ್ಯಮವನ್ನು ಹೇಗೆ ಬಳಸಬಹುದು ಎಂಬುದರ ಕುರಿತು ವಿದ್ಯಾರ್ಥಿಗಳು ಚರ್ಚಿಸಿದರು. ಕೋವಿಡ್ -19 ಸಾಂಕ್ರಾಮಿಕ ಸಂಕಷ್ಟದ ಸಂದರ್ಭದಲ್ಲಿ ಶಿಕ್ಷಣವು ಮಾನವೀಯ ಮೌಲ್ಯಗಳನ್ನು ಕಲಿಸಲು ಹೇಗೆ ಸಹಾಯ ಮಾಡುತ್ತದೆ ಎಂಬ ಕುರಿತು ಉಪನ್ಯಾಸ ಜರುಗಿದವು. ಪ್ರಮುಖವಾಗಿ ಬಡತನದ ಪ್ರಮಾಣ, ಅನಕ್ಷರತೆಯ ಪರಿಣಾಮಗಳು, ಲಿಂಗ ಅಸಮಾನತೆ, ಮಕ್ಕಳ ಅಕಾಲಿಕ ಮರಣ ಮತ್ತು ಹೆಚ್ಚುತ್ತಿರುವ ಮಾನವ ಜನಸಂಖ್ಯೆ ವಿಷಯಗಳನ್ನು ಪ್ರಸ್ತುತ ಪಡಿಸಿದರು.